# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 33, ಮನೋರಾಯನಪಾಳ್ಯ**

ಸಂಖ್ಯೆ: ಸ.ಅ/ವಾ-33/ಪಿ.ಆರ್/ /2022-23 ದಿನಾಂಕ:-18-07-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮುಖ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:-18-07-2022 ರಂದು ವಾರ್ಡ್ ನಂ:33. ಮನೋರಾಯನಪಾಳ್ಯ. ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಅಶೋಕ್ ಹಿಂದಾ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ಸೋಮಶೇಖರ್ ನಿಟ್ಟೂರೆ | ಸಹಾಯಕ ಅಭಿಯಂತರರು ವಾರ್ಡ್ ನಂ: 33 |
| 3 | ಶ್ರೀ. ಕುಮಾರ್ | ಕಿರಿಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4 | ಶ್ರೀಮತಿ. ಅನೀಸ್ ಫಾತೀಮಾ | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ. ನಾಗೇಂದ್ರ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ. ಬಸವರಾಜ್ | ಮಾರ್ಷಲ್ |
| 7. | ಶ್ರೀ. ಮೂರ್ತಿ | ಕಂದಾಯ ಅಧಿಕಾರಿ |
| 8. | ಶ್ರೀ. ಇರ್ಫಾನ್ | ಸಾರ್ವಜನಿಕರು |
| 9. | ಶ್ರೀ. ನದೀಮ್ | ಸಾರ್ವಜನಿಕರು |
| 10 | ಶ್ರೀ. ಜಮೀಲ್ | ಸಾರ್ವಜನಿಕರು |
| 11 | ಶ್ರೀ. ಅರುಣ್ | ಸಾರ್ವಜನಿಕರು |
| 12. | ಶ್ರೀ. ಆಸೀಫ್ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ಅಶೋಕ್ ಹಿಂದಾ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ.ಸೋಮಶೇಖರ್ ನಿಟ್ಟೂರೆ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-33 ರವರು ಹಿಂದಿನ ಸಭೆಯಲ್ಲಿ ನಡೆದಂತಹ ವಿಷಯಗಳ ಹಾಗೂ ದೂರುಗಳ ಕುರಿತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಲಾಯಿತು.

**ಘನತ್ಯಾಜ್ಯ:**

1. ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿಯನ್ನು ಮಾಡುವ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
2. ಶಾಲೀಮಾರ್ ಅಪಾರ್ಟ್‌ಮೆಂಟ್, ದಿನ್ನೂರು, 4ನೇ ಅಡ್ಡರಸ್ತೆ, Compound wall ಬಳಿ ಇರುವ ಮಣ್ಣನ್ನು ವಿಲೇವಾರಿ ಮಾಡಿ ಸ್ವಚ್ಛಗೊಳಿಸಲಾಯಿತು.

ಬಿ.ಡಬ್ಲ್ಯೂ.ಎಸ್.ಎಸ್.ಬಿ:

1. ಚಾಮುಂಡಿನಗರ ಮುಖ್ಯರಸ್ತೆಯ, ಚಾಮುಂಡೇಶ್ವರಿ ದೇವಸ್ಥಾನದ ಹತ್ತಿರ ಇರುವ ಮ್ಯಾನ್‌ಹೋಲ್‌ಗಳು ರಸ್ತೆ ಮಟ್ಟಕ್ಕಿಂತ ಕೆಳಗಡೆ ಇದ್ದು, ಅವುಗಳನ್ನು ರಸ್ತೆ ಮಟ್ಟಕ್ಕೆ ಎತ್ತರಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಕ್ರಮ ಕೈಗೊಳ್ಳುತ್ತಿರುತ್ತಾರೆ.
2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಕ್ರಮ ಕೈಗೊಂಡಿರುತ್ತಾರೆ.

ಕಾಮಗಾರಿ ಇಲಾಖೆ:

1. ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯವು ಪ್ರಗತಿಯಲ್ಲಿರುತ್ತದೆ.
2. ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆ ಚರಂಡಿಗಳಲ್ಲಿ ತುಂಬಿಕೊಂಡಿರುವ ಹೂಳನ್ನು ತೆಗೆಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

<u>ದಿನಾಂಕ:-18-07-2022 ರಂದು ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು</u>

ಕಾಮಗಾರಿ ಇಲಾಖೆ:

1. ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆ ಪಕ್ಕದ ಮಳೆನೀರು ಚರಂಡಿಗಳಲ್ಲಿ ಒಡೆದಿರುವ/ಕಾಣೆಯಾಗಿರುವ ಚಪ್ಪಡಿ ಕಲ್ಲು/ಸ್ಲ್ಯಾಬ್‌ಗಳನ್ನು ಅಳವಡಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯ ಮೇಲೆ ಹರಿಯುವ ನೀರನ್ನು ರಸ್ತೆ ಪಕ್ಕದ ಚರಂಡಿಗಳಿಗೆ ಸರಾಗವಾಗಿ ಹರಿಯುವಂತೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.

ಆರೋಗ್ಯ ಇಲಾಖೆ:

1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿರುವ ತಳ್ಳುವ ಗಾಡಿ ವ್ಯಾಪಾರಸ್ಥರು ಪ್ಲಾಸ್ಟಿಕ್ ಕೈಚೀಲಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಕ್ರಮ ಕೈಗೊಂಡು ದಂಡ ವಿಧಿಸಲು ಬಿ.ಬಿ.ಎಂ.ಪಿ ಮಾರ್ಷಲ್ ರವರಿಗೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್ ಸ್ಥಳಗಳಲ್ಲಿ ಕಸವನ್ನು ಸುರಿಯುತ್ತಿರುವವರ ವಿರುದ್ಧ ಕ್ರಮ ಕೈಗೊಂಡು ದಂಡ ವಿಧಿಸಲು ಬಿ.ಬಿ.ಎಂ.ಪಿ ಮಾರ್ಷಲ್ ರವರಿಗೆ ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 33 ಮನೋರಾಯನಪಾಳ್ಯ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 33 ಮನೋರಾಯನಪಾಳ್ಯ

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
5. ಕಛೇರಿ ಕಡತಕ್ಕೆ.